ಈ) ಸರ್ಕಾರದವರು ಈಗಾಗಲೇ ಆದೇಶ ನೀಡಿದ ಪ್ರಕಾರ ಬೇಗನೆ ಕಟ್ಟಡ ಕಟ್ಟಲು ಕ್ರಮ ಕೈಗೊಳ್ಳುವರೇ ?

ಶ್ರೀ ಓಂ ಪ್ರಕಾಶ್ ಕಣಗಲಿ (ಭಾರಿ ನೀರಾವರಿ ರಾಜ್ಯ ಮಂತ್ರಿಗಳು):–

ಅ) ಬೈಲಹೊಂಗಲ ತಾಲ್ಲೂಕಿನ ವಕ್ಕುಂದ ಹಾಗೂ ಸವದತ್ತಿ ತಾಲ್ಲೂಕಿನ ಸುತಗಟ್ಟಿ ಗ್ರಾಮಗಳಲ್ಲಿ 7 ಶಾಲಾ ಕೋಣೆಗಳನ್ನು, ಪುನರ್ವಸತಿ ಕಾರ್ಯಕ್ರಮದ ಅಡಿಯಲ್ಲಿ ಕಟ್ಟುವ ಬಗ್ಗೆ ಅವಶ್ಯ ಕ್ರಮ ತೆಗೆದುಕೊಳ್ಳಬೇಕೆಂದು, ಕ್ರಮವಾಗಿ ಸರ್ಕಾರಿ ಪತ್ರಗಳ ಸಂಖ್ಯೆ: ಐಡಿ 315 ಎನ್‌ಐಎನ್ 91 ದಿನಾಂಕ 27–12–91 ಮತ್ತು ನಂ. ಐಡಿ 312 ಎನ್‌ಐಎನ್ 91 ದಿನಾಂಕ 27–12–91ರಲ್ಲಿ ಬೆಳಗಾವಿಯ ನೀರಾವರಿ ಉತ್ತರ ವಲಯದ ಮುಖ್ಯ ಇಂಜಿನಿಯರ್‌ರವರಿಗೆ ಸೂಚನೆ ನೀಡಲಾಗಿದೆ.

ಆ) ದಿನಾಂಕ 27–12–91ರ ಸರ್ಕಾರಿ ಪತ್ರಗಳಲ್ಲಿ ಈಗಾಗಲೇ ನೀಡಿರುವ ಸೂಚನೆಗಳಂತೆ ಮುಂದಿನ ಕ್ರಮ ತೆಗೆದುಕೊಳ್ಳಬೇಕೆಂದು ಮುಖ್ಯ ಇಂಜಿನಿಯರ್‌ರವರಿಗೆ ದಿನಾಂಕ 27–4–92ರ ಸರ್ಕಾರಿ ಪತ್ರದಲ್ಲಿ ಸ್ಪಷ್ಟೀಕರಣ ನೀಡಲಾಗಿದೆ.

ಇ) ಹೌದು.

ಈ) ಮುಖ್ಯ ಇಂಜಿನಿಯರ್‌ರವರು ದಿನಾಂಕ 24–12–92ರ ತಮ್ಮ ಪತ್ರದಲ್ಲಿ ಸರ್ಕಾರದ ನಿರ್ದಿಷ್ಟ ಸ್ಪಷ್ಟೀಕರಣ ಕೋರಿದ್ದು, ಅದು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ. ಈ ಬಗ್ಗೆ ಆದಷ್ಟು ಬೇಗ ತೀರ್ಮಾನ ತೆಗೆದುಕೊಳ್ಳಲಾಗುವುದು.

ಪದವೀಧರ ಕ್ಷೇತ್ರದಿಂದ ವಿಧಾನ ಪರಿಷತ್ತಿನ ಚುನಾವಣೆಗಳಲ್ಲಿ ಪ್ರಾಥಮಿಕ ಶಾಲೆಯ ಉಪಾಧ್ಯಾಯರುಗಳಿಗೆ ಮತಚಲಾವಣೆ

2003: ಶ್ರೀ ಜಿ. ಪುಟ್ಟಸ್ವಾಮಿಗೌಡ (ಹೊಳೆನರಸೀಪುರ):– ಮಾನ್ಯ ಮುಖ್ಯ ಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಪದವೀಧರ ಕ್ಷೇತ್ರದಿಂದ ವಿಧಾನ ಪರಿಷತ್ತಿನ ಚುನಾವಣೆಗಳಲ್ಲಿ ಪ್ರಾಥಮಿಕ ಶಾಲೆಯ ಉಪಾಧ್ಯಾಯರುಗಳಿಗೆ ಮತ ಚಲಾಯಿಸುವ ಅರ್ಹತೆ ಇರುವುದಿಲ್ಲವೆಂಬ ಅಂಶ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಪ್ರಾಥಮಿಕ ಶಾಲಾ ಉಪಾಧ್ಯಾಯರುಗಳಿಗೆ ಮತ ಚಲಾಯಿಸುವ ಹಕ್ಕನ್ನು ಕೊಡುವ ಸಲುವಾಗಿ ಭಾರತದ ಸಂವಿಧಾನವನ್ನು ತಿದ್ದುಪಡಿ ಮಾಡಲು ಸರ್ಕಾರವು ಕೇಂದ್ರ ಸರ್ಕಾರಕ್ಕೆ ಕೋರುವ ಪ್ರಸ್ತಾವನೆ ಇದೆಯೇ ?

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯಮಂತ್ರಿಗಳು):–

ಅ) ಇಲ್ಲ. ಪ್ರಜಾಪ್ರಾತಿನಿಧ್ಯ ಅಧಿನಿಯಮ 1950 ಇದರಲ್ಲಿರುವ ಪರಿಚ್ಛೇದ 27 (5) (ಎ) ಇದರಲ್ಲಿರುವ ಷರತ್ತುಗಳನ್ನು ಪೂರೈಸಿದ್ದಲ್ಲಿ, ಪದವಿ: ಡಿಪ್ಲೊಮೊ ಇವುಗಳನ್ನು ಹೊಂದಿದ್ದರೆ ಮತ್ತು ಹೆಸರುಗಳನ್ನು ಪದವೀಧರ ಮತಪಟ್ಟಿಗಳಲ್ಲಿ ಸೇರಿಸಿದ್ದರೆ, ಅಂತಹ ಪ್ರಾಥಮಿಕ ಶಾಲಾ ಉಪಾಧ್ಯಾಯರುಗಳು ಪದವೀಧರ ಕ್ಷೇತ್ರಗಳಿಂದ ವಿಧಾನ ಪರಿಷತ್ತಿನ ಚುನಾವಣೆಗಳಲ್ಲಿ ಮತ ಚಲಾಯಿಸಲು ಅರ್ಹರಾಗುತ್ತಾರೆ.

ಆ) ಉದ್ಭವಿಸುವುದಿಲ್ಲ.